## ಪತ್ರಿಕಾ ಪ್ರಕಟಣೆ

### ಚನ್ನಗಿರಿ ತಾಲ್ಲೂಕಿನ ಅನಧಿಕೃತ ಅಡಿಕೆ ಗೋದಾಮುಗಳ ಮೇಲೆ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳಿಂದ ದಾಳಿ: ರೂ.3.1 ಕೋಟಿ ಮೌಲ್ಯದ ಅನಧಿಕೃತ ಅಡಿಕೆ ದಾಸ್ತಾನು ಪತ್ತೆ

ವಾಣಿಜ್ಯ ತೆರಿಗೆ ಇಲಾಖೆಯ ಜಾರಿ ವಿಭಾಗದ ಅಧಿಕಾರಿಗಳು ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನಲ್ಲಿ ಅನಧಿಕೃತ ಗೋದಾಮುಗಳ ಮೇಲೆ ದಿನಾಂಕ: 27.05.2020 ರಂದು ದಾಳಿ ನಡೆಸಿ ರೂ.3.1 ಕೋಟಿ ಮೌಲ್ಯದ ಅಡಿಕೆಯನ್ನು ಅನಧಿಕೃತವಾಗಿ ದಾಸ್ತಾನು ಮಾಡಿರುವುದನ್ನು ಪತ್ತೆಹಚ್ಚಿ ರೂ.31 ಲಕ್ಷ ತೆರಿಗೆ ಹಾಗೂ ದಂಡವನ್ನು ವಿಧಿಸಿರುತ್ತಾರೆ.

ಕೋವಿಡ್–19 ಲಾಕ್‌ಡೌನ್ ಅವಧಿಯಲ್ಲಿ ಹಲವು ವ್ಯಕ್ತಿಗಳು ಜಿಎಸ್‌ಟಿ ಕಾಯ್ದೆಯಡಿಯಲ್ಲಿ ನೋಂದಣಿ ಪಡೆಯದೆ ಅಡಿಕೆ ವ್ಯವಹಾರದಲ್ಲಿ ತೊಡಗಿಕೊಂಡಿರುವ ಬಗ್ಗೆ ಲಭಿಸಿದ ವಿಶ್ವಾಸಾರ್ಹ ಮಾಹಿತಿಯನ್ನು ಆಧರಿಸಿ ಅಂತಹ ಗೋದಾಮುಗಳ ಮೇಲೆ ಹಾಗೂ ಅಡಿಕೆ ಸಾಗಾಣಿಕೆಯ ಮೇಲೆ ತೀವ್ರ ನಿಗಾ ವಹಿಸಲಾಗಿತ್ತು.

ಬುಧವಾರದ ನಸುಕಿನಲ್ಲಿ ನಡೆಸಲಾದ ಜಂಟಿ ಕಾರ್ಯಾಚರಣೆಯಲ್ಲಿ ದಕ್ಷಿಣ ವಲಯ, ಜಾರಿ, ಬೆಂಗಳೂರು ಹಾಗೂ ಬಳ್ಳಾರಿಯ ಜಾರಿ ವಿಭಾಗದ ಅಧಿಕಾರಿಗಳು ಚನ್ನಗಿರಿ ತಾಲ್ಲೂಕಿನ ನಲ್ಲೂರು, ಕೆರೆಬಿಳಚಿ ಗ್ರಾಮಗಳ 5 ಅನಧಿಕೃತ ಗೋದಾಮುಗಳ ತಪಾಸಣೆ ನಡೆಸಿದಾಗ ಕೆಲ ವ್ಯಕ್ತಿಗಳು ಜಿಎಸ್‌ಟಿ ಕಾಯ್ದೆಯಡಿಯಲ್ಲಿ ನೋಂದಣಿ ಪಡೆಯದೆ ಸೂಕ್ತ ದಾಖಲೆಗಳಿಲ್ಲದ ರೂ.3.1 ಕೋಟಿ ಮೌಲ್ಯದ ಅಡಿಕೆಯನ್ನು ದಾಸ್ತಾನು ಮಾಡಿರುವುದನ್ನು ಪತ್ತೆ ಹಚ್ಚಲಾಗಿದೆ.

ಸದರಿ ವ್ಯಕ್ತಿಗಳ ಮೇಲೆ ರೂ.31 ಲಕ್ಷ ತೆರಿಗೆ ಹಾಗೂ ದಂಡವನ್ನು ವಿಧಿಸಲಾಗಿದ್ದು, ರೂ.12 ಲಕ್ಷಗಳನ್ನು ಈಗಾಗಲೇ ವಸೂಲು ಮಾಡಲಾಗಿದೆ. ಈ ಎಲ್ಲಾ ವ್ಯವಹಾಗಳನ್ನು ಅನಧಿಕೃತವಾಗಿ ನಡೆಸಿರುವುದರಿಂದ ಈ ಮಾಹಿತಿಯನ್ನು ಎಪಿಎಂಸಿ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.





ಕರ್ನಾಟಕ ರಾಜ್ಯದ ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳು ಮತ್ತು ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಉತ್ತಮ ಗುಣಮಟ್ಟದ ಅಡಿಕೆಯನ್ನು ಬೆಳೆಯಲಾಗುತ್ತಿದ್ದು, ಹೆಚ್ಚಿನ ದಾಸ್ತಾನನ್ನು ಉತ್ತರ ಭಾರತದ ರಾಜ್ಯಗಳಿಗೆ ರವಾನಿಸಲಾಗುತ್ತದೆ. ವಾಣಿಜ್ಯ ತೆರಿಗೆ ಇಲಾಖೆಯು ಅಡಿಕೆ ದಾಸ್ತಾನು ಹಾಗೂ ಸಾಗಾಣಿಕೆಯ ಮೇಲೆ ತೀವ್ರ ನಿಗಾವಹಿಸಿದ್ದು, ಜಿಎಸ್‌ಟಿ ಕಾಯ್ದೆಯನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಯಪಡಿಸಿದೆ.

(ಎಂ.ಎಸ್.ಶ್ರೀಕರ್)

Scanned with CamScanner